(4)

# ಕರ್ನಾಟಕ ವಿಧಾನ ಪರಿಷತ್ತು

## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಐವನ್ ಡಿ' ಸೋಜಾ ರವರು ನಿಯಮ 72ರ ಮೇರೆಗೆ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಕಂದಾಯ ಸಚಿವರ ಹೇಳಿಕೆ:

### ಸೂಚನೆ:

ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಗಳಲ್ಲಿ ಮೂಲಗೇಣಿ ಒಕ್ಕಲುದಾರರು ವಾಸಿಸುತ್ತಿರುವವರಿಗೆ ಭೂಮಿ ಹಕ್ಕನ್ನು ನೀಡಲು ಸರ್ಕಾರ ಕಾನೂನು ರಚಿಸಿದ್ದು, ಅರ್ಜಿಗಳನ್ನು ಸ್ವೀಕರಿಸಿದ್ದರೂ ಮೂಲದಾರರು ಒಳಗೇಣಿ ಇನ್ನೂ ಕಾಯ್ದೆ ಜಾರಿಗೊಳ್ಳದೇ ಇರುವುದರಿಂದ ಮೂಲಗೇಣಿದಾರರು ಅನುಭವಿಸುತ್ತಿರುವ ದೌರ್ಜನ್ಯದ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯ ಬಯಸುತ್ತೇನೆ.

### ಹೇಳಿಕೆ

ಕೃಷಿಯೇತರ ಭೂಮಿಗಳು, ಮುಖ್ಯವಾಗಿ ಮನೆ ನಿವೇಶನಗಳ ಸಂಬಂಧದಲ್ಲಿ ಮೂಲಗೇಣಿ ಗುತ್ತಿಗೆಗಳ ಕೆಲವು ಬಗೆಗಳು ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಚಾಲ್ತಿಯಲ್ಲಿವೆ. ಅನೇಕ ಕಾರಣಗಳಿಂದ ಮೂಲಗೇಣಿದಾರರು ಅಥವಾ ಒಳಮೂಲಗೇಣಿದಾರರು ಆ ಹಿಡುವಳಿ ಸ್ವತ್ತನ್ನು ಪೂರ್ಣವಾಗಿ ಅನುಭವಿಸಲು ಸಾಧ್ಯವಾಗಿರಲಿಲ್ಲ. ಆದುದರಿಂದ ಮೂಲಗೇಣಿ ಅಥವಾ ಒಳಮೂಲಗೇಣಿದಾರರಿಗೆ ಮಾಲೀಕತ್ವವನ್ನು ಪ್ರದಾನ ಮಾಡಲು **ಕರ್ನಾಟಕ ಮೂಲಗೇಣಿ ಅಥವಾ ಒಳಮೂಲಗೇಣಿದಾರರಿಗೆ ಮಾಲೀಕತ್ವವನ್ನು ಪ್ರದಾನ ಮಾಡುವ ಅಧಿನಿಯಮ, 2011** ಅನ್ನು ದಿನಾಂಕ: 25.07.2012 ರಂದು ಸರ್ಕಾರವು ರಾಜ್ಯಪತ್ರದಲ್ಲಿ ಪ್ರಕಟಿಸಿತ್ತು. ಈ ಅಧಿನಿಯಮದ ಉಪಬಂಧಗಳು ದಿನಾಂಕ: 20.12.2012 ರಿಂದ ಜಾರಿಗೆ ಬಂದಿರುತ್ತವೆ.

ಮೇಲ್ಕಂಡ ಅಧಿನಿಯಮ ಜಾರಿಗೆ ಬಂದ ನಂತರ, ಅದನ್ನು ಜಾರಿಗೊಳಿಸಲು ನಿಯಮಗಳನ್ನು ಸಹ ರಚಿಸಲು ಸರ್ಕಾರ ತಯಾರು ಮಾಡಿಕೊಂಡಿತ್ತು. ಈ ಹಂತದಲ್ಲಿ ಮೂಲಗೇಣಿದಾರರ ಸಂಘ ಮತ್ತು ಮೂಲಿದಾರರ ಸಂಘಗಳು ಸದರಿ ಮಾಲೀಕತ್ವ ಪ್ರದಾನ ಮಾಡುವ ಅಧಿನಿಯಮಕ್ಕೆ ಸಂಬಂಧಿಸಿದಂತೆ ಸರ್ಕಾರಕ್ಕೆ ಅನೇಕ ಮನವಿಗಳನ್ನು ಸಲ್ಲಿಸಿದ್ದರು. ಸರ್ಕಾರದ ಹಂತದಲ್ಲಿ ಈ ಬಗ್ಗೆ ಪರಿಶೀಲಿಸಿ, ಸದರಿ ಕಾಯ್ದೆಯನ್ನು ಅನುಷ್ಠಾನಗೊಳಿಸಲು ದಿನಾಂಕ: 07.11.2016 ರಂದು **ಕರ್ನಾಟಕ ಮೂಲಗೇಣಿ ಅಥವಾ ಒಳಮೂಲಗೇಣಿದಾರರಿಗೆ ಮಾಲೀಕತ್ವವನ್ನು ಪ್ರದಾನ ಮಾಡುವ ನಿಯಮಗಳು, 2016** ಅನ್ನು ಕರ್ನಾಟಕ ರಾಜ್ಯಪತ್ರದ ವಿಶೇಷ ರಾಜ್ಯಪತ್ರದಲ್ಲಿ ಅಧಿಕೃತವಾಗಿ ಪ್ರಕಟಿಸಿರುತ್ತದೆ. ಈ ಬಗ್ಗೆ ಜಿಲ್ಲಾಧಿಕಾರಿಗಳು, ದಕ್ಷಿಣ ಕನ್ನಡ ಮತ್ತು ಉಡುಪಿ ರವರಿಗೆ ಸೂಚನೆಗಳನ್ನು ಸಹ ನೀಡಿ ಸದರಿ ನಿಯಮಗಳನ್ನು ಅನುಷ್ಠಾನಗೊಳಿಸಲು ಕ್ರಮವಹಿಸಬೇಕೆಂದು ತಿಳಿಸಲಾಗಿತ್ತು.

ಈ ಹಂತದಲ್ಲಿ ಇದಕ್ಕೆ ಸಂಬಂಧಿಸಿದಂತೆ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ ರಿಟ್ ಅರ್ಜಿ ಸಂಖ್ಯೆ: 11158-66/2013 ಮತ್ತು 62434/2016 ದಾಖಲಾಗಿತ್ತು. ಸದರಿ ಪ್ರಕರಣವು ದಿನಾಂಕ: 22.05.2023 ರಲ್ಲಿ ಇತ್ಯರ್ಥವಾಗಿರುತ್ತದೆ. ಆದರೆ ಸದರಿ ಆದೇಶದ ವಿರುದ್ಧ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ W.A.No.726/2023 ದಾಖಲಾಗಿರುತ್ತದೆ. ಪ್ರಸ್ತುತ ಪ್ರಕರಣ ವಿಚಾರಣಾ ಹಂತದಲ್ಲಿರುತ್ತದೆ.

ಸಂಖ್ಯೆ: ಆರ್‌ಡಿ 18 ಎಲ್‌ಆರ್‌ಎಸ್ 2024

[ಕೃಷ್ಣ ಬೈರೇಗೌಡ]
ಕಂದಾಯ ಸಚಿವರು.